ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 29 ನೇ ಜನವರಿ, 2021

ನಂಜನಗೂಡು ನೂತನ ರಸ್ತೆ ಸಾರಿಗೆ ಸಂಸ್ಥೆ ಬಸ್ ನಿಲ್ದಾಣದಲ್ಲಿ ಶೌಚಾಲಯ ಸೌಲಭ್ಯದ ಬಗ್ಗೆ

ಶ್ರೀ ಎಸ್. ನಾಗರಾಜ್(ಸಂದೇಶ ನಾಗರಾಜ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

50 (48) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ನಂಜನಗೂಡು ಪಟ್ಟಣದ ನೂತನ ಸಾರಿಗೆ ಸಂಸ್ಥೆ ಬಸ್ ನಿಲ್ದಾಣದಲ್ಲಿ ನಿರ್ಮಿಸಿರುವ ಶೌಚಾಲಯವನ್ನು ಬಂದ್ ಮಾಡಿರುವುದರಿಂದ (ಮುಚ್ಚಿರುವುದರಿಂದ) ದಿನನಿತ್ಯ ಪ್ರಯಾಣಿಸುವ ನೂರಾರು ಸಾರ್ವಜನಿಕ ಪ್ರಯಾಣಿಕರಿಗೆ ಅನಾನುಕೂಲ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಮತ್ತು ನಂಜನಗೂಡು ಪುರಸಭೆ ಮಧ್ಯೆ ಶೌಚಾಲಯ ನಿರ್ವಹಣೆ ವಿಷಯದಲ್ಲಿ ಗೊಂದಲ ಉಂಟಾಗಿರುವುದು ನಿಜವೇ ಹಾಗಿದ್ದಲ್ಲಿ, ಇದನ್ನು ಬಗೆಹರಿಸಿ ಸಾರ್ವಜನಿಕರಿಗೆ ಶೌಚಾಲಯ ಸೌಲಭ್ಯ ಒದಗಿಸಲು ಕ್ರಮ ಜರುಗಿಸಲಾಗುವುದೇ?